# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 488 |
| ಸದಸ್ಯರ ಹೆಸರು | : | ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 10-03-2020 |
| ಉತ್ತರಿಸುವ ಸಚಿವರು | : | ಮಾನ್ಯ ನಗರಾಭಿವೃದ್ಧಿ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ತುಮಕೂರು ಮಹಾನಗರವು ದಿನೇ ದಿನೇ ವಿಸ್ತಾರವಾಗಿ ಬೆಳೆಯುತ್ತಿರುವುದರಿಂದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಮಾದರಿಯಲ್ಲಿ ಹೊರ ವರ್ತುಲ ರಸ್ತೆಯನ್ನು ನಿರ್ಮಾಣ ಮಾಡಲು ಸರ್ಕಾರ ಚಿಂತನೆ ನಡೆಸಿದೆಯೇ; (ವಿವರ ನೀಡುವುದು) | ತುಮಕೂರು ಮಹಾನಗರದಲ್ಲಿ ಕ್ಯಾತ್ಸಂದ್ರದಿಂದ ಗುಬ್ಬಿ ಗೇಟ್‌ವರೆಗಿನ ಹಾಲಿ ಇರುವ 10.50 ಕಿ.ಮೀ. ಉದ್ದದ ವರ್ತುಲ ರಸ್ತೆಯನ್ನು ತುಮಕೂರು ಸ್ಮಾರ್ಟ್‌ಸಿಟಿ ಲಿಮಿಟೆಡ್ ವತಿಯಿಂದ ಅಭಿವೃದ್ಧಿಪಡಿಸಲಾಗುತ್ತಿದೆ. |
| ಆ) | ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವಿವರ ನೀಡುವುದು: | ಸ್ಮಾರ್ಟ್‌ಸಿಟಿ ಯೋಜನೆಯಡಿಯಲ್ಲಿ, ತುಮಕೂರು ಸ್ಮಾರ್ಟ್‌ಸಿಟಿ ಲಿಮಿಟೆಡ್ ವತಿಯಿಂದ ನಗರದಲ್ಲಿ ಹಾಲಿ ಇರುವ 10.5 ಕಿ.ಮೀ ಉದ್ದದ ವರ್ತುಲ ರಸ್ತೆ-ರಾಷ್ಟ್ರೀಯ ಹೆದ್ದಾರಿ-4 ರ ಕ್ಯಾತಸಂದ್ರ ಜಂಕ್ಷನ್‌ನಿಂದ ರಾಷ್ಟ್ರೀಯ ಹೆದ್ದಾರಿ 206 ರ ಗುಬ್ಬಿ ಗೇಟ್‌ವರೆಗಿನ ರಸ್ತೆಯನ್ನು ರೂ.93.87 ಕೋಟಿಗಳ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ.<br><br>ಮುಂದುವರೆದು, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ಸುಮಾರು 40 ಕಿ.ಮೀ ಉದ್ದದ ಹೊರವರ್ತುಲ ರಸ್ತೆಯನ್ನು ನಿರ್ಮಾಣ ಮಾಡಲು ಯೋಜನೆಯನ್ನು ಹಮ್ಮಿಕೊಂಡಿದ್ದು ವಿಸ್ತೃತ ಯೋಜನಾ ವರದಿಯ (ಡಿಪಿಆರ್) ಹಂತದಲ್ಲಿದೆ. ಈ ಯೋಜನೆಯ ಪ್ರಕಾರ ಹೊರ ವರ್ತುಲ ರಸ್ತೆಯು ದಾಬಸ್‌ಪೇಟ್ ಹತ್ತಿರದ ನಂದಿಹಳ್ಳಿ ಗ್ರಾಮದಿಂದ ಪ್ರಾರಂಭವಾಗಿ ತುಮಕೂರು ನಗರದ ನಂತರ ಮಲ್ಲಸಂದ್ರ ಗ್ರಾಮದ ಸಮೀಪ ಎನ್‌ಹೆಚ್-206 ರಲ್ಲಿ ಸಂಪರ್ಕಿಸಿ ನಂತರ ಎನ್‌ಹೆಚ್-04 ರಸ್ತೆಯನ್ನು ವಸಂತನರಸಾಪುರವನ್ನು ಸಂಪರ್ಕಿಸಲಿದೆ. |
| ಇ) | ಈಗಿರುವ ಹೊರ ವರ್ತುಲ ರಸ್ತೆಯನ್ನು ಹೊರತುಪಡಿಸಿ, ತುಮಕೂರು ಮಹಾನಗರದೊಳಗೆ ರಾಷ್ಟ್ರೀಯ ಹೆದ್ದಾರಿ ವಾಹನಗಳು ಸಂಚರಿಸುತ್ತಿರುವ ಕಾರಣ ದಟ್ಟಣೆ ಹೆಚ್ಚಿರುವುದರಿಂದ ನಗರದ ಹೊರ ಭಾಗದಲ್ಲಿ ಕೊರಟಗೆರೆ-ಶಿರಾ-ಕುಣಿಗಲ್-ಗುಬ್ಬಿ ಮತ್ತು ದಾಪಸ್‌ಪೇಟ್ ಮಾರ್ಗದಲ್ಲಿ ರಿಂಗ್ ರಸ್ತೆ ನಿರ್ಮಿಸಲಾಗುವುದೇ; ಈ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು; | |

ಸಂಖ್ಯೆ: ನಅಇ 88 ಸಿಎಸ್‌ಎಸ್ 2020

(ಬಿ.ಎ.ಬಸವರಾಜ)
ಮಾನ್ಯ ನಗರಾಭಿವೃದ್ಧಿ ಸಚಿವರು.